# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೇಶವ ಪ್ರಸಾದ್ ಎಸ್ ಇವರು ಪ್ರಸ್ತಾಪಿಸಿರುವ ಶೂನ್ಯ ವೇಳೆಯ ಸೂಚನೆಗೆ ಉತ್ತರಿಸುವ ಬಗ್ಗೆ:-

**ವಿಷಯ:-**

ಹೊಸ ದಿಗಂತ ಪತ್ರಿಕೆಯಲ್ಲಿ 'ನಮ್ಮ ಮಕ್ಕಳಿಗೆ ಮೊಟ್ಟೆ ಬೇಡ, ಟಿಸಿ ಕೊಡಿ!" ಎಂಬ ತಲೆ ಬರಹಡಿಯಲ್ಲಿ ಪ್ರಕಟಗೊಂಡ ವರದಿಯನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಅವಕಾಶ ಕೋರುತ್ತೇನೆ.

ಮಂಡ್ಯ ಜಿಲ್ಲೆಯ ಆಲಕೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಮಧ್ಯಾಹ್ನ ಬಿಸಿ ಊಟ ಯೋಜನೆಯಡಿ ಮೊಟ್ಟೆ ವಿತರಿಸುವ ಕುರಿತು ಪೋಷಕರಿಂದ ತೀವ್ರ ವಿರೋಧ ವ್ಯಕ್ತವಾಗಿದೆ. ಶಾಲೆಯ ಮುಂಬಾಗಿಲಲ್ಲೇ ದೇವಾಲಯ ಇರುವುದರಿಂದ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುತ್ತದೆ ಎಂಬ ಕಾರಣದಿಂದ ಪೋಷಕರು, ಸ್ಥಳೀಯ ಸಂಘಟನೆಗಳು ಮತ್ತು ಧಾರ್ಮಿಕ ನಾಯಕರು ಮೊಟ್ಟೆ ವಿತರಿಸದಂತೆ ಒತ್ತಾಯಿಸಿದ್ದಾರೆ.

ಈ ವಿರೋಧದ ಪರಿಣಾಮವಾಗಿ, ಪೋಷಕರು ತಮ್ಮ ಮಕ್ಕಳಿಗೆ ಶಾಲೆಯಿಂದ ಟ್ರಾನ್ಸ್‌ಫರ್ ಸರ್ಟಿಫಿಕೇಟ್ (ಟಿಸಿ) ನೀಡುವಂತೆ ಶಾಲಾ ಆಡಳಿತವನ್ನು ಒತ್ತಾಯಿಸುತ್ತಿದ್ದಾರೆ. 124 ವಿದ್ಯಾರ್ಥಿಗಳಿರುವ ಈ ಶಾಲೆಯಲ್ಲಿ ಈಗಾಗಲೇ ಹಲವು ಮಕ್ಕಳು ಟಿಸಿ ಪಡೆದುಕೊಂಡಿದ್ದಾರೆ ಎಂಬ ಮಾಹಿತಿ ದೊರಕಿದೆ.

ಮಧ್ಯಾಹ್ನ ಊಟ ಯೋಜನೆ ಜಾರಿಗೆ ಸರ್ಕಾರ ಬದ್ಧವಾಗಿದ್ದರೂ, ಧಾರ್ಮಿಕ ಭಾವನೆಗಳಿಗೆ ಹಾನಿಯಾಗದಂತೆ ಹಾಗೂ ಮಕ್ಕಳ ಶಿಕ್ಷಣ ಹಕ್ಕಿಗೆ ಧಕ್ಕೆಯಾಗದಂತೆ ತಕ್ಷಣ ಸಮನ್ವಯ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ.

ಆದ್ದರಿಂದ, ಈ ವಿಷಯವನ್ನು ತುರ್ತು ಎಂದು ಪರಿಗಣಿಸಿ, ಸರ್ಕಾರವು ತಕ್ಷಣದ ಕ್ರಮಗಳನ್ನು ಕೈಗೊಂಡು ಸಮಸ್ಯೆಯನ್ನು ಬಗೆಹರಿಸಿ, ಮಕ್ಕಳ ಶಿಕ್ಷಣ ಹಕ್ಕು ಮತ್ತು ಸಮುದಾಯದ ಧಾರ್ಮಿಕ ಭಾವನೆಗಳನ್ನೂ ಗೌರವಿಸುವಂತೆ ನಾನು ತಮ್ಮ ಮೂಲಕ ಶೂನ್ಯ ವೇಳೆಯಲಿ ಆಗ್ರಹಿಸುತ್ತೇನೆ.

**ಉತ್ತರ :**

ಮಂಡ್ಯ ಜಿಲ್ಲೆಯ ಆಲಕೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಮಧ್ಯಾಹ್ನ ಬಿಸಿಊಟ ಯೋಜನೆಯಡಿ ಮೊಟ್ಟೆ ವಿತರಿಸುವ ಕುರಿತು ಪೋಷಕರಿಂದ ತೀವ್ರ ವಿರೋಧ ವ್ಯಕ್ತವಾದ ಕೂಡಲೇ ಸದರಿ ಶಾಲೆಯಲ್ಲಿ ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮದಡಿಯಲ್ಲಿ ಮಕ್ಕಳಿಗೆ ಮೊಟ್ಟೆ/ಬಾಳೆಹಣ್ಣು ವಿತರಿಸುವ ಬಗ್ಗೆ ಶಾಲೆಗೆ ಶಿಕ್ಷಣಾಧಿಕಾರಿಗಳು ಅಕ್ಷರದಾಸೋಹ ಜಿಲ್ಲಾಪಂಚಾಯತ್, ಮಂಡ್ಯ, ಸಹಾಯಕ ನಿರ್ದೇಶಕರು ಅಕ್ಷರದಾಸೋಹ ಮಂಡ್ಯ ತಾಲ್ಲುಕು ಪಂಚಾಯತ್, ಶಿಕ್ಷಣ ಸಂಯೋಜಕರು ರವರು ಗಳೊಂದಿಗೆ , ಮಂಡ್ಯ ಉತ್ತರ ವಲಯದ ಕ್ಷೇತ್ರಶಿಕ್ಷಣಾಧಿಕಾರಿಗಳು ಭೇಟಿ ನೀಡಿದಾಗ ಆ ದಿನದಂದು ಶಾಲಾ ತರಗತಿಯ ಒಟ್ಟು ದಾಖಲಾತಿ 124ಕ್ಕೆ ಹಾಜರಾತಿ 48 ಇದ್ದು, 48 ವಿದ್ಯಾರ್ಥಿಗಳಲ್ಲಿ 42 ವಿದ್ಯಾರ್ಥಿಗಳು ಮೊಟ್ಟೆ ಸೇವನೆ ಮಾಡಿದ್ದು, 06 ವಿದ್ಯಾರ್ಥಿಗಳು ಬಾಳೆ ಹಣ್ಣನ್ನು ಸೇವಿಸಿರುತ್ತಾರೆ. ಅಲ್ಲಿಯವರೆಗೂ ಮೊಟ್ಟೆ ವಿತರಣೆ ಮಾಡದೇ ಇರುವುದಕ್ಕೆ ಮಂಡ್ಯ ಉತ್ತರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕಾರಣ ಕೇಳಿ ನೋಟಿಸ್ ಜಾರಿ ಮಾಡಿ, ಮೊಟ್ಟೆ ಸೇವಿಸುವ ಮಕ್ಕಳಿಗೆ ಮೊಟ್ಟೆಯನ್ನೇ ನೀಡುವಂತೆ ಹಾಗೂ ಮೊಟ್ಟೆಸೇವಿಸದೆ ಇರುವ ಮಕ್ಕಳಿಗೆ ಬಾಳೆಹಣ್ಣನ್ನು ನೀಡುವಂತೆ ಮುಖ್ಯಶಿಕ್ಷಕರಿಗೆ ತಿಳಿಸಲಾಯಿತು.

ಆದರೆ ಮೊಟ್ಟೆ ವಿತರಣೆಗೆ ಪರವಿರೋಧ ಪ್ರತಿಕ್ರಿಯೆಗಳು ಪೋಷಕ ರಿಂದ ವ್ಯಕ್ತವಾದ ಹಿನ್ನಲೆಯಲ್ಲಿ ದಿನಾಂಕ: 22-07-2025 ರಂದು ಸಹಾಯಕ ನಿರ್ದೇಶಕರು ಅಕ್ಷರ ದಾಸೋಹ, ಬಿ.ಆರ್.ಸಿ.ಸಿ., ಶಿಕ್ಷಣ ಸಂಯೋಜಕರು ಮತ್ತು ಸಂಪೂಹ ಸಂಪನ್ಮೂಲ ವ್ಯಕ್ತಿ ರವರೊಂದಿಗೆ ಕ್ಷೇತ್ರ ಶಿಕ್ಷಣಧಿಕಾರಿಗಳು ಹಾಗೂ ಉಪ ನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ ಮಂಡ್ಯ ಇವರುಗಳು ಶಾಲೆಗೆ ಭೇಟಿ ನೀಡಿ ಪೋಷಕರ/ ಮಕ್ಕಳ ಇಚ್ಛೆಯನುಸಾರವಾಗಿ ಕ್ರಮವಾಗಿ ಮೊಟ್ಟೆ ಸೇವಿಸುವ ಮಕ್ಕಳಿಗೆ ಮೊಟ್ಟೆಯನ್ನೇ ನೀಡುವಂತೆ ಹಾಗೂ ಮೊಟ್ಟೆ ಸೇವಿಸದೆ ಇರುವ ಮಕ್ಕಳಿಗೆ ಬಾಳೆಹಣ್ಣನ್ನು ವಿತರಿಸಲು ಸೂಚನೆ ನೀಡಿದ ಕಾರಣ ಒಪ್ಪಿಗೆ ಸೂಚಿಸಿರುವ ಎಲ್ಲಾ ವಿದ್ಯಾರ್ಥಿಗಳು ಮೊಟ್ಟೆ ಸೇವನೆ ಮಾಡಿರುತ್ತಾರೆ.

ನಂತರದ ದಿನಗಳಲ್ಲಿ ಪುನಃ ಪೋಷಕ ರಿಂದ ಮೊಟ್ಟೆ ವಿತರಣೆಗೆ ವಿರೋಧ ವ್ಯಕ್ತವಾದ ಕಾರಣ ಶಾಲೆಯಲ್ಲಿನ ದೈನಂದಿನ ಹಾಜರಾತಿಯಲ್ಲಿ ಕುಂಠಿತವಾಗಿರುತ್ತದೆ. ದಿನಾಂಕ:24-7-2025 ಮತ್ತು 26-07-2025 ರಂದು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಅಕ್ಷರ ದಾಸೋಹ ಸಹಾಯಕ ನಿರ್ದೇಶಕರು ಹಾಗೂ ಅಕ್ಷರ ದಾಸೋಹ ಶಿಕ್ಷಣಾಧಿಕಾರಿಗಳು ಶಾಲೆಗೆ ಭೇಟಿ ನೀಡಿ ದೈನಂದಿನ ಶೈಕ್ಷಣಿಕ ಚಟುವಟಿಕೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಕಳುಹಿಸಲು ಪೋಷಕರ ಮನವೊಲಿಸಲು ಪ್ರಯತ್ನಿಸಿರುತ್ತಾರೆ.

ಇಲಾಖೆಯ ಈ ಪ್ರಯತ್ನದ ನಂತರವೂ ಸುಮಾರು 45 ಮಕ್ಕಳು ಪಕ್ಕದ ಕೀಲಾರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ದಾಖಲಾತಿ ಬಯಸಿರುವುದಾಗಿ ತಿಳಿಸಿ ಅಂತಹ ಮಕ್ಕಳ ವರ್ಗಾವಣೆ ಪತ್ರಗಳನ್ನು ಕೀಲಾರ ಶಾಲೆಗೆ ಕಳುಹಿಸಿಕೊಡುವಂತೆ ಕೋರಿಕೆ ಸಲ್ಲಿಸುತ್ತಿರುವುದಾಗಿ ತಿಳಿದು ಬಂದ ಕಾರಣದಿಂದ ಮಕ್ಕಳನ್ನು ಆಲಕೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿಯೇ ಮುಂದುವರಿಸುವಂತೆ ಪೋಷಕರ ಮನವೊಲಿಸಲು ದಿನಾಂಕ:28-07-2025 ರಂದು ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು ಮತ್ತು ಮಂಡ್ಯ ತಾಲ್ಲೂಕಿನ ತಹಶಿಲ್ದಾರ್ ಇವರುಗಳ ಉಪಸ್ಥಿತಿಯಲ್ಲಿ ಪೋಷಕರ ಹಾಗೂ ಗ್ರಾಮಸ್ಥರ ಸಭೆಯನ್ನು ಏರ್ಪಡಿಸಿ ಜಿಲ್ಲಾಧಿಕಾರಿಗಳು ಪೋಷಕರು ಹಾಗೂ ಗ್ರಾಮಸ್ಥರಲ್ಲಿ ವಿನಂತಿಸುತ್ತಾ, ಎಲ್ಲರೂ ಸರ್ಕಾರದ ಯೋಜನೆಯನ್ನು ಅನುಷ್ಠಾನಗೊಳಿಸಲು ಸಹಕರಿಸುವಂತೆ ಮತ್ತು ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಶಾಲೆಗೆ ಕಳುಹಿಸುವಂತೆ ಮನವೊಲಿಸಲು ಪ್ರಯತ್ನಿಸಲಾಗಿರುತ್ತದೆ. ಜಿಲ್ಲಾಡಳಿತದ ಈ ಕ್ರಮದ ನಂತರ ಶಾಲೆಯಲ್ಲಿನ ಮಕ್ಕಳ ದೈನಂದಿನ ಹಾಜರಾತಿಯಲ್ಲಿ ಏರಿಕೆ ಕಂಡು ಬಂದಿದ್ದು ಇದಲ್ಲದೆ ಶಾಲೆಗೆ ಹಾಜರಾದ 59 ಮಕ್ಕಳ ಪೈಕಿ 46 ಮಕ್ಕಳು ಮೊಟ್ಟೆ ಸೇವಿಸುತ್ತಿದ್ದು ಮತ್ತು ಉಳಿದ 13 ಮಕ್ಕಳು ಬಾಳೆಹಣ್ಣು ಸೇವಿಸುತ್ತಿದ್ದಾರೆಂದು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ ಮಂಡ್ಯ ಜಿಲ್ಲೆ ಇವರು ವರದಿ ಸಲ್ಲಿಸಿರುತ್ತಾರೆ.

**ಸಂಖ್ಯೆ: ಇಪಿ 104 ಎಂಎಂಎಸ್ 2025**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**